**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.31/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | ಉದಯಕುಮಾರ ಕುಲಕರ್ಣಿ | ಪಿಡಬ್ಲ್ಯೂ | 16 |
| ತಂದೆಯ ಹೆಸರು | ಕೃಷ್ಣಾರಾವ | ಪಿಡಬ್ಲ್ಯೂ | 6 |
| ವಯಸ್ಸು | 66 ವರ್ಷ | | |
| ಉದ್ಯೋಗ | ನಿವೃತ್ತ ಪಿ.ಎಸ್.ಐ | | |
| ವಾಸಸ್ಥಳ | ಹಾವೇರಿ | | |

**ದಿಃ18.02.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1) ನಾನು ದಿನಾಂಕಃ 04.12.2018 ರಿಂದ ದಿನಾಂಕಃ 31.05.2020 ರವರೆಗೆ ಹಾವೇರಿ ಶಹರ ಪೊಲೀಸ ಠಾಣೆಯಲ್ಲಿ ಪಿ.ಎಸ್.ಐ ಆಗಿ ಸೇವೆ ಸಲ್ಲಿಸಿದ್ದೇನೆ. ದಿನಾಂಕಃ 03.08.2019 ರಂದು ಚಾ.ಸಾ-1 ಇವರು ಬೆಳಗಿನ 10-00 ಘಂಟೆಗೆ ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ಪಿರ್ಯಾದಿ ಕೊಟ್ಟಿದ್ದು, ದೂರನ್ನು ಪಡೆದು ಠಾಣಾ ಮೊಕದ್ದಮೆ ಸಂಖ್ಯೆ 58/2019 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ.ವರವದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿದ್ದೇನೆ. ಅದೇ ದಿನ ಘಟನಾ ಸ್ಥಳಕ್ಕೆ ನಾನು ಮತ್ತು ಪಂಚರು ಎಲ್ಲರೂ ಬೇಟಿ ನೀಡಿದ್ದು ಸರಿದ ಘಟನಾ ಸ್ಥಳವನ್ನು ಚಾ.ಸಾ-1 ಇವರು ತೋರಿಸಿದ್ದ ಸ್ಥಳದಲ್ಲಿ ಬೆಳಗಿನ 10-

45 ಘಂಟೆಯಿಂದ 11-30 ರವರೆಗೆ ಚಾ.ಸಾ-1 ರಿಂದ 3 ರವರ ಹಾಗೂ ನನ್ನ ಸಮಕ್ಷಮ ಘಟನಾ ಸ್ಥಳದ ಪಂಚನಾಮೆಯನ್ನು ಜರುಗಿಸಿ ಕಚ್ಚಾ ನಕಾಶೆಯನ್ನು ತಯಾರಿಸಿ, ಅಲ್ಲದೇ ಘಟನಾ ಸ್ಥಳದಲ್ಲಿ ಒಂದು ಫೋಟೋ ತೆಗೆದಿದ್ದೇನೆ. ಅದೇ ದಿನ ಚಾ.ಸಾ-4 ಇವರ ಹೇಳಿಕೆ ಪಡೆದಿದ್ದೇನೆ. ನಂತರ ಈ ಪ್ರಕರಣದ ಕಡತವನ್ನು ಚಾ.ಸಾ-17 ರವರಿಗೆ ಮುಂದಿನ ತನಿಖೆಗಾಗಿ ವಹಿಸಿಕೊಟ್ಟಿದ್ದೇನೆ.

2) ಈ ಪ್ರಕರಣದಲ್ಲಿ ಚಾ.ಸಾ-1 ಇವರು ಠಾಣೆಗೆ ಖುದ್ದಾಗಿ ಹಾಜರಾಗಿ ನೀಡಿದ ಗಣಕೀಕೃತ ಪಿರ್ಯಾದಿಯನ್ನು ಗುರುತಿಸಿಬಲ್ಲೆ, ಅದನ್ನು ಈಗಾಗಲೇ ನಿ.ಪಿ-2 ಎಂದು ಗುರುತಿಸಲಾಗಿದ್ದು ಸಾಕ್ಷಿ ಸಹಿಯನ್ನು ನಿ.ಪಿ-2(ಬಿ) ಎಂದು ಗುರುತಿಸಲಾಯಿತು . ಸ್ಥಳ ಪಂಚನಾಮೆಯನ್ನು ಈಗಾಗಲೇ ನಿ.ಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ-3(ಸಿ) ಎಂದು ಗುರುತಿಸಲಾಯಿತು. ಕಚ್ಚಾ ನಕಾಶೆಯನ್ನು ಈಗಾಗಲೇ ನಿ.ಪಿ-5 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ-5(ಬಿ) ಎಂದ ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿ.ಪಿ-7 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-7(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಶ್ರೀ.ಪಿ.ಜಿ.ಪಿ ವಕೀಲರಿಂದ: 4 ನೇ ಆರೋಪಿ ಪರವಾಗಿ:**

3) ಈ ಪ್ರಕರಣದಲ್ಲಿ ಚಾ.ಸಾ-1 ಠಾಣೆಗೆ ಖುದ್ದಾಗಿ ಹಾಜರಾಗಿ ಗಣಕೀಕೃತ ಪಿರ್ಯಾದಿಯನ್ನು ಕೊಟ್ಟಿಲ್ಲ ಅಂದರೆ ಸರಿಯಲ್ಲ. ಪಿರ್ಯಾದಿಯ ಆಧಾರದ ಮೇಲೆ ಆರೋಪಿಗಳ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳುಳ ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಘಟನಾ ಸ್ಥಳಕ್ಕೆ ಬೇಟಿ ನೀಡಿಲ್ಲ ಹಾಗೂ ಪಂಚರ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಫೋಟೋ ತೆಗೆದಿಲ್ಲ ಅಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ನಾನು ನನ್ನ

ಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ ತನಿಖೆ ಮಾಡದೇ ಇದ್ದರೂ ಸಹ ಆರೋಪಿತರ ವಿರುದ್ದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನಾನು ಈ ಪ್ರಕರಣದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಅಂದರೆ ಸರಿಯಲ್ಲ.

**ಪಾಟೀ ಸವಾಲು: ಶ್ರೀ.ಸಿ.ಎಂ.ಎಸ್ ವಕೀಲರಿಂದ: 5 ಮತ್ತು 6 ನೇ ಆರೋಪಿ ಪರವಾಗಿ: 4 ನೇ ಆರೋಪಿ ಪರ ವಕೀಲರು ಮಾಡಿದಂತಹ ಪಾಟೀ ಸವಾಲನ್ನೇ ಯಥಾವತ್ತಾಗಿ ಅಳವಡಿಸಿಕೊಳ್ಳುತ್ತಾರೆ.**

**ಪಾಟೀ ಸವಾಲು: ಶ್ರೀ.ಎಂ.ಸಿ.ಬಿ ವಕೀಲರಿಂದ: 1 ನೇ ಆರೋಪಿ ಪರವಾಗಿ: 4 ನೇ ಆರೋಪಿ ಆರೋಪಿ ಪರ ವಕೀಲರು ಮಾಡಿದಂತಹ ಪಾಟೀ ಸವಾಲನ್ನೇ ಯಥಾವತ್ತಾಗಿ ಅಳವಡಿಸಿಕೊಳ್ಳುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.